**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ; ನ್ಯಾಯಾಲಯ, ಶ್ರೀರಂಗಪಟ್ಟಣ.** DW-1

ಸಾಕ್ಷಿಗೆ ಪ್ರಮಾಣ ವಚನ ಮಾಡಲಾದ ದಿ ೦ಃ 08.07.2025

ಪಾಟೀ ಸವಾಲುಃ ದೂರುದಾರರ ಪರ ವಕೀಲರಿಂದಃ

ನಾನು ಮತ್ತು ದೂರುದಾರರು ಒಂದೇ ಊರಿನವರು ಇರುತ್ತೇವೆ. ನೀವು ಹಾಗೂ ದೂರುದಾರರು ಒಂದೇ ಊರಿನವರಾದ ಕಾರಣ ನಿಮಗೂ ಹಾಗೂ ಅವರಿಗೂ ತುಂಬಾ ಪರಿಚಯ ಇರುತ್ತದೆ ಎನ್ನುವ ಪ್ರಶ್ನೆಗೆ ಸಾಕ್ಷಿಯು ಪರಿಚಯ ಇರುವುದಿಲ್ಲ ಎಂದು ನುಡಿಯುತ್ತಾರೆ. ನನಗೆ ಇಬ್ಬರು ಹೆಣ್ಣು ಮಕ್ಕಳು ಇರುತ್ತಾರೆ ಎಂದರೆ ಸರಿ.

ನನ್ನ ಮೊದಲನೇ ಮಗಳ ಮದುವೆಯನ್ನು 3 ವರ್ಷದ ಹಿಂದೆ ಮಾಡಿರುತ್ತೇನೆ. ಅದೇ ರೀತಿ ನನ್ನ ಎರಡನೇ ಮಗಳ ಮದುವೆಯು 2 ವರ್ಷದ ಹಿಂದೆ ಆಗಿರುತ್ತದೆ. ನನ್ನ ಇಬ್ಬರು ಹೆಣ್ಣು ಮಕ್ಕಳ ಮದುವೆಯನ್ನು ನನ್ನ ಅತ್ತೆರವರಾದ ಜಯಲಕ್ಷ್ಮಿರವರು ಮಾಡಿರುತ್ತಾರೆ. ನನ್ನ ಇಬ್ಬರು ಹೆಣ್ಣು ಮಕ್ಕಳ ಮದುವೆಗೆ ಎಷ್ಟು ಹಣ ಖರ್ಚಾಗಿರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. ನನ್ನ ಹೆಣ್ಣು ಮಕ್ಕಳ ಮದುವೆಯ ಸಂದರ್ಭದಲ್ಲಿ ನೀವು ನಿಮ್ಮ ಮನೆಯನ್ನು ರಿಪೇರಿ ಮಾಡಿಸಿರುತ್ತೀರಿ ಎನ್ನುವ ಪ್ರಶ್ನೆಗೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ.

ದೂರುದಾರರಿಗೆ ಒಬ್ಬ ಮಗ ಇರುತ್ತಾನೆ ಎಂದರೆ ನನಗೆ ಗೊತ್ತಿರುವುದಿಲ್ಲ. ದೂರುದಾರರ ಹೆಂಡತಿ ಟೈಲರಿಂಗ್ ಕೆಲಸ ಮಾಡುತ್ತಾರೆ ಎಂದರೆ ನನಗೆ ಗೊತ್ತಿರುವುದಿಲ್ಲ.

ಸಾಕ್ಷಿಗೆ ಈಗ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ತೋರಿಸಿ ಈ ಪ್ರಮಾಣ ಪತ್ರವನ್ನು ಯಾರ ಮಾಹಿತಿಯ ಮೇರೆಗೆ ತಯಾರಿಸಲಾಗಿರುತ್ತದೆ ಎನ್ನುವ ಪ್ರಶ್ನೆಗೆ ಸಾಕ್ಷಿಯು ಗೊತ್ತಿಲ್ಲ ಎಂದು ನುಡಿಯುತ್ತಾರೆ.

ಸಾಕ್ಷಿಗೆ ಈಗ ಅವರ ಮುಖ್ಯ ವಿಚಾರಣೆಯ ಪ್ರಮಾಣ ಪತ್ರಿಕೆಯಲ್ಲಿರುವ ಅವರ ಸಹಿಗಳನ್ನು ತೋರಿಸಿ ಈ ಸಹಿಗಳು ನಿಮ್ಮದೇ ಆಗಿರುತ್ತದೆ ಎನ್ನುವ ಪ್ರಶ್ನೆಗೆ ಸಾಕ್ಷಿಯು ಅವುಗಳನ್ನು ನೋಡಿ ನನ್ನದಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಯು ಮುಂದುವರೆದು ನಾನು ಹೆಬ್ಬೆಟ್ಟನ್ನು ಮಾತ್ರ ಹಾಕುತ್ತೇನೆ ಎಂದು ನುಡಿಯುತ್ತಾರೆ.

(ಈ ಹಂತದಲ್ಲಿ ದೂರುದಾರರ ಪರ ವಕೀಲರು ಮುಂದುವರೆದ ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರಿದ್ದು ಆಲಿಸಿ ಅನುಮತಿ ನೀಡಲಾಯಿತು)

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.